# ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ, ಬಿ.ಹೆಚ್.ರಸ್ತೆ, ತುಮಕೂರು-572 103, ☎ : 0816-2255650, 2273511ಫ್ಯಾಕ್ಸ್ : 0816-2270719

ಸಂಖ್ಯೆ:ತು.ವಿ.: ಪ.ವಿ.:ವಿ.ನಿ.-07/2021-22/64 ದಿನಾಂಕ: 27.04.2021

## ಸುತ್ತೋಲೆ

**ವಿಷಯ: 2020 ರ ನವಂಬರ್/ಡಿಸೆಂಬರ್ ಮಾಹೆಗಳಲ್ಲಿ ನಡೆದ ವಿವಿಧ ಸ್ನಾತಕ ಪದವಿಗಳ I,II,III,IV,V,VI ಸೆಮಿಸ್ಟರ್ ಪರೀಕ್ಷೆಗಳ ಫಲಿತಾಂಶ ಪ್ರಕಟಣೆ ಮತ್ತು ಉತ್ತರ ಪತ್ರಿಕೆಗಳ ಛಾಯಾ ಪ್ರತಿ / ಮರುಮೌಲ್ಯಮಾಪನ / ಛಾಲೆಂಜ್ ಮೌಲ್ಯಮಾಪನದ ಮಾಹಿತಿ ಕುರಿತು.**

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ **ವಿವಿಧ ಸ್ನಾತಕ ಪದವಿಗಳಲ್ಲಿ ವ್ಯಾಸಂಗ ಮಾಡಿ ಡಬಲ್ ದಿ ಡ್ಯೂರೇಷನ್ ಆಫ್ ದಿ ಕೋರ್ಸ್ ಪೂರ್ಯೈಸಿ ಅನುತ್ತೀರ್ಣರಾಗಿದ್ದ ವಿದ್ಯಾರ್ಥಿಗಳಿಗೆ ವಿಶೇಷವಾಗಿ** 2020 ರ ನವಂಬರ್/ಡಿಸೆಂಬರ್ ಮಾಹೆಗಳಲ್ಲಿ ನಡೆಸಲಾದ I,II,III,IV,V,VI ಸೆಮಿಸ್ಟರ್ ಪರೀಕ್ಷೆಗಳ ಫಲಿತಾಂಶವನ್ನು ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದ್ದು, ಫಲಿತಾಂಶ ಪಟ್ಟಿ (Result Sheet) ಗಳನ್ನು ತಮ್ಮ ಕಾಲೇಜಿನ ಇ-ಮೇಲ್ ವಿಳಾಸಕ್ಕೆ ಕಳುಹಿಸಲಾಗುವುದು. ಸದರಿ ಮಾಹಿತಿಯನ್ನು ವಿದ್ಯಾರ್ಥಿಗಳ ಗಮನಕ್ಕೆ ತರುವುದು.

ತಡೆಹಿಡಿಯಲಾಗಿರುವ ಅಥವಾ ಫಲಿತಾಂಶ ಪ್ರಕಟವಾಗದಿರುವ ಕುರಿತು ವಿದ್ಯಾರ್ಥಿಗಳು ಸೂಕ್ತ ಮಾಹಿತಿಗಳನ್ನು ಪ್ರಾಂಶುಪಾಲರ ಮೂಲಕ ಈ ಕಚೇರಿಗೆ ಒದಗಿಸಿ, **ಒಂದು ವಾರದೊಳಗಾಗಿ ಫಲಿತಾಂಶವನ್ನು ಪಡೆದುಕೊಳ್ಳತಕ್ಕದ್ದು.**

| | | |
|---|---|---|
| 1. | ವಿದ್ಯಾರ್ಥಿಗಳು ಛಾಯಾ ಪ್ರತಿಗಾಗಿ ಕಾಲೇಜಿನಲ್ಲಿ ಅರ್ಜಿ ಸಲ್ಲಿಸಲು ಕಡೆಯ ದಿನಾಂಕ | 20.05.2021 |
| 2. | ಕಾಲೇಜಿನವರು ಆನ್‌ಲೈನ್‌ನಲ್ಲಿ ನಮೂದಿಸಲು ಕೊನೆಯ ದಿನಾಂಕ (ಛಾಯಾ ಪ್ರತಿ) | 24.05.2021 |
| 3. | ವಿಶ್ವವಿದ್ಯಾನಿಲಯಕ್ಕೆ ವಿವರಗಳನ್ನು ಸಲ್ಲಿಸಲು ಕೊನೆಯ ದಿನಾಂಕ (ಛಾಯಾ ಪ್ರತಿ) | 26.05.2021 |
| 4. | ಪರೀಕ್ಷಾ ವಿಭಾಗದಿಂದ ಕಾಲೇಜಿನವರು ಜೆರಾಕ್ಸ್ (ಛಾಯಾ ಪ್ರತಿ) ಪ್ರತಿಯನ್ನು ಪಡೆಯುವ ದಿನಾಂಕ | 31.05.2021 (ಬೆಳಗ್ಗೆ 11:00 ಗಂಟೆಯ ನಂತರ) |
| 5. | ವಿದ್ಯಾರ್ಥಿಗಳು ಮರುಮೌಲ್ಯಮಾಪನ/ ಛಾಲೆಂಜ್ ಮೌಲ್ಯಮಾಪನಕ್ಕೆ ಕಾಲೇಜಿನಲ್ಲಿ ಅರ್ಜಿ ಸಲ್ಲಿಸಲು ಕಡೆಯ ದಿನಾಂಕ | 05.06.2021 |
| 6. | ಮರುಮೌಲ್ಯಮಾಪನ/ಛಾಲೆಂಜ್ ಮೌಲ್ಯಮಾಪನಕ್ಕೆ ಸಲ್ಲಿಸಿದ ಅರ್ಜಿಗಳ ವಿವರಗಳನ್ನು ಕಾಲೇಜಿನವರು ಆನ್‌ಲೈನ್‌ನಲ್ಲಿ ನಮೂದಿಸಲು ಕಡೆಯ ದಿನಾಂಕ | 07.06.2021 |
| 7. | ಮರುಮೌಲ್ಯಮಾಪನ/ಛಾಲೆಂಜ್ ಮೌಲ್ಯಮಾಪನಕ್ಕೆ ಸಲ್ಲಿಸಿದ ಅರ್ಜಿಗಳ ವಿವರಗಳನ್ನು ಕಾಲೇಜಿನವರು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಲು ಕಡೆಯ ದಿನಾಂಕ | 09.06.2021 |

**ಶೇಕಡಾ 15ಕ್ಕಿಂತ ಕಡಿಮೆ ಅಂಕಗಳನ್ನು ಪಡೆದ ವಿದ್ಯಾರ್ಥಿಗಳು ಚಾಲೆಂಜ್ ಮೌಲ್ಯಮಾಪನಕ್ಕೆ ಅರ್ಜಿಸಲ್ಲಿಸತಕ್ಕದ್ದು. ಆದಾಗ್ಯೂ ಶೇಕಡಾ 15 ಕ್ಕಿಂತ ಕಡಿಮೆ ಅಂಕಗಳನ್ನು ಪಡೆದ ವಿದ್ಯಾರ್ಥಿಗಳು ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಿದ್ದಲ್ಲಿ ಅಂತಹ ಅರ್ಜಿಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸುವುದಿಲ್ಲ. ಪ್ರಾಂಶುಪಾಲರು ಅರ್ಜಿಗಳನ್ನು ಪರಿಶೀಲಿಸಿ, ಆನ್‌ಲೈನ್‌ನಲ್ಲಿ ನಮೂದಿಸುವುದು.**

ಛಾಲೆಂಜ್ ಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸುವವರು ಕಡ್ಡಾಯವಾಗಿ ನಿಗದಿತ ಶುಲ್ಕ ಪಾವತಿಸಿ, ಉತ್ತರ ಪತ್ರಿಕೆಯ ಛಾಯಾಪ್ರತಿಯನ್ನು ಪಡೆದು ಸಂಬಂಧಿಸಿದ ಅಧ್ಯಾಪಕರಿಂದ ಮೌಲ್ಯಮಾಪನ ಮಾಡಿಸಿ ನೀಡಿರುವ ಅಂಕಗಳಲ್ಲಿ ವ್ಯತ್ಯಾಸ ಕಂಡುಬಂದಲ್ಲಿ ಅಂತಹ ವಿದ್ಯಾರ್ಥಿಗಳು ನಿಗದಿತ ಮರುಮೌಲ್ಯಮಾಪನ ಶುಲ್ಕದೊಂದಿಗೆ ಕಡ್ಡಾಯವಾಗಿ ಒಂದು ವಿಷಯಕ್ಕೆ **ರೂ.500-00 (ರೂಪಾಯಿ ಐದು ನೂರು ಮಾತ್ರ)** ಗಳ ಹೆಚ್ಚುವರಿ ಶುಲ್ಕ ಪಾವತಿಸಿ ಅರ್ಜಿ ಸಲ್ಲಿಸುವುದು.

(....2)